<u>ಗೌರಿಬಿದನೂರು ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯದಲ್ಲಿ</u>

ಸಿ.ಸಿ. **1030/2022**

ಪಿ.ಡಬ್ಲ್ಯೂ-**1**

ಸಿ.ಡಬ್ಲ್ಯೂ-**1**

ಸಾಕ್ಷಿದಾರರ ಹೆಸರು ಃ ಹನುಮಪ್ಪ

ತಂದೆ ಹೆಸರು ಃ ಗಂಗಪ್ಪ

ವಯಸ್ಸು ಃ **50** ವರ್ಷ

ಕೆಲಸ ಃ ವ್ಯವಸಾಯ

ವಾಸ ಸ್ಥಳ ಃ ಉಚ್ಚೋದನಹಳ್ಳಿ

ಸಾಕ್ಷಿಗೆ ಪ್ರಮಾಣ ವಚನ ಬೋದಿಸಲಾದ ದಿನಾಂಕಃ **30-06-2026**

<u>ಮುಖ್ಯ ವಿಚಾರಣೆಃಃ ಶ್ರೀ ಸರ್ಕಾರಿ ಅಭಿಯೋಜಕರಿಂದಃ</u>

ಚಾ.ಸಾ-2 ನನ್ನ ನಾದಿನಿ. ಸಾಕ್ಷಿಗೆ ಹೇಳಿಕೆಯನ್ನು ನ್ನು ತೋರಿಸಲಾಗಿ, ಅದನ್ನು ನಿಪಿ-**1** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-**1** ಎ ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿಲ್ಲ. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಸಾಕ್ಷಿಯು ನೋಡಿ ಗುರುತಿಸಿರುವುದಿಲ್ಲ. ಸಾಕ್ಷಿಗೆ ನ್ಯಾಯಾಲಯದ ಮುಂದೆ ಇರುವ ಒಂದು ಹಿಡಿ ಗಾತ್ರದ ಕಲ್ಲನ್ನು ತೋರಿಸಲಾಗಿ ಅದನ್ನು ಗುರುತಿಸಿರುವುದಿಲ್ಲ.

**(**ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸರ್ಕಾರಿ ಅಭಿಯೋಜಕರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು**.)**

ದಿನಾಂಕ 05.08.2022 ರಂದು ಸಂಜೆ 05.00 ಗಂಟೆಗೆ ನನ್ನ ಗ್ರಾಮದ ಬಳಿ ನಾನು ಮನೆಯಲ್ಲಿ ಇದ್ದಾಗ ಆರೋಪಿಯು ಏಕಾಏಕಿ ನನ್ನ ಮೇಲೆ ಜಗಳ ತೆಗೆದು ಅದನ್ನು ಬಿಡಿಸಲು ಬಂದಾಗ ಚಾ.ಸಾ-2 ರವರನ್ನು ಕೆಳಗೆ ತಳ್ಳಿ ಮೂಗೇಟು ಮಾಡಿದರು ಎಂದರೆ ಸರಿಯಲ್ಲ. ಅದೇ ದಿನ ನನ್ನನ್ನು ಆರೋಪಿಯು ಕಲ್ಲಿನಿಂದ ಹೊಡೆದನು ಎಂದರೆ ಸರಿಯಲ್ಲ. ನನ್ನನ್ನು ಕೆಟ್ಟ ಶಬ್ದಗಳಿಂದ ಬೈದನು ಎಂದರೆ ಸರಿಯಲ್ಲ. ನ್ಯಾಯಾಲಯದ

ಮುಂದೆ ಇರುವ ಒಂದು ಕಲ್ಲನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ಗುರುತಿಸಿರುವುದಿಲ್ಲ. (ನ್ಯಾಯಾಲಯದ ಅನುಕೂಲಕ್ಕಾಗಿ ಮು.ಮಾ-1 ಎಂದು ಗುರುತಿಸಲಾಯಿತು). ಆರೋಪಿ ಜೊತೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿ ಪರ ವಕೀಲರಾದ ಶ್ರೀ ವಿ.ವಿ.ಕೆ ರವರಿಂದ ಇರುವುದಿಲ್ಲ.
ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ. ಇದೆ

ಸಹಿ/-
ಹೆ.ಸಿ.ನ್ಯಾ ಮತ್ತು ಜೆಎಂಎಫ್‌ಸಿ,
ಗೌರಿಬಿದನೂರು